# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1428
2. ಸದಸ್ಯರ ಹೆಸರು : ಶ್ರೀ ಕುಶಾಲಪ್ಪ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 20.03.2025
4. ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಯವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ದಿನಾಂಕ: 07.06.2013ರ ವರ್ಗಾವಣೆ ಮಾರ್ಗಸೂಚಿಯಲ್ಲಿದ್ದ ಲೋಪಗಳೇನು; | ದಿನಾಂಕ: 07.06.2013ರ ವರ್ಗಾವಣಾ ಮಾರ್ಗಸೂಚಿಗಳನ್ನು ಹೊರಡಿಸಿ 10 ವರ್ಷಗಳಿಗೂ ಹೆಚ್ಚಿನ ಅವಧಿಯಾಗಿದ್ದರಿಂದ, ಸದರಿ ವರ್ಗಾವಣೆ ಮಾರ್ಗಸೂಚಿಗಳನ್ನು ಆಡಳಿತದಲ್ಲಿನ ಹೊಸ ಬೆಳವಣಿಗೆ, ಬದಲಾವಣೆಗಳ ಹಿನ್ನೆಲೆಯಲ್ಲಿ ಪ್ರಸ್ತುತ ಸನ್ನಿವೇಶಕ್ಕನುಗುಣವಾಗಿ ಪುನರಾವಲೋಕಿಸಿ ವರ್ಗಾವಣೆ ಮಾರ್ಗಸೂಚಿಗಳನ್ನು ಪರಿಷ್ಕರಿಸಿದೆ. |
| ಆ) | ದಿನಾಂಕ: 25.06.2024ರ ಹೊಸ ವರ್ಗಾವಣೆ ಮಾರ್ಗಸೂಚಿಯಲ್ಲಿ, ಅವಧಿ ಪೂರ್ವ/ಅವಧಿ ಮೀರಿದ ವರ್ಗಾವಣೆಗಳನ್ನು ಮಾಡಬೇಕಾದಲ್ಲಿ, ಸೂಕ್ತ ಕಾರಣಗಳನ್ನು ಕಡ್ಡಾಯವಾಗಿ ಲಿಖಿತವಾಗಿ ದಾಖಲಿಸಿ ವರ್ಗಾವಣೆಗಳನ್ನು ಮಾಡುವ ಮುನ್ನ ಇಲಾಖೆಗಳು ಮಾನ್ಯ ಮುಖ್ಯಮಂತ್ರಿಗಳ ಪೂರ್ವಾನುಮೋದನೆಯನ್ನು ಪಡೆಯಬೇಕೆಂಬ ನಿಬಂಧನೆಯನ್ನು ಕೈಬಿಡಲು ಕಾರಣವೇನು? | ಸಾರ್ವತ್ರಿಕ ವರ್ಗಾವಣೆಯ ಅವಧಿ ಮುಗಿದ ನಂತರ ಮಾಡಲಾಗುವ ವರ್ಗಾವಣೆಗಳಿಗೆ ಸಂಬಂಧಿಸಿದಂತೆ, ದಿನಾಂಕ 25.06.2024ರ ಕಂಡಿಕೆ 5(3) ರಲ್ಲಿ "ವಿಶೇಷವಾದ ಅಥವಾ ಅಪವಾದಾತ್ಮಕ ಕಾರಣಗಳ ಮೇರೆಗೆ ಮಾಡುವ ವಾರ್ಷಿಕ ವರ್ಗಾವಣೆಗಳ ಸಂಖ್ಯೆಯನ್ನು ಕನಿಷ್ಠ ಮಟ್ಟಕ್ಕೆ ಸೀಮಿತಗೊಳಿಸಿ ಮತ್ತು ನಿರ್ದಿಷ್ಟ ಪ್ರಕರಣಗಳಲ್ಲಿ ವರ್ಗಾವಣೆಯು ಅವಶ್ಯವೆನಿಸಿದಲ್ಲಿ ಇಂತಹ ಪ್ರಕರಣಗಳನ್ನು ಚಾಚೂ ತಪ್ಪದೇ ಸನ್ಮಾನ್ಯ ಮುಖ್ಯಮಂತ್ರಿಗಳಿಗೆ ಸಲ್ಲಿಸಿ ಅವರ ಅನುಮೋದನೆ ಪಡೆದು ವರ್ಗಾವಣೆ ಮಾಡತಕ್ಕದು" ಎಂದು ಸ್ಪಷ್ಟಪಡಿಸಲಾಗಿರುತ್ತದೆ. |
| ಇ) | ದಿನಾಂಕ:25.06.2024ರ ಹೊಸ ವರ್ಗಾವಣೆ ಮಾರ್ಗಸೂಚಿಯನ್ನು ಸಿದ್ಧಪಡಿಸಲು ಅವಲಂಬಿಸಿರುವ ದಾಖಲೆಗಳಾವುವು? | ಆಡಳಿತದಲ್ಲಿನ ಹೊಸ ಬೆಳವಣಿಗೆ, ಬದಲಾವಣೆಗಳ ಹಿನ್ನೆಲೆಯಲ್ಲಿ ಪ್ರಸ್ತುತ ಸನ್ನಿವೇಶಕ್ಕನುಗುಣವಾಗಿ ಪುನರಾವಲೋಕಿಸಿ ವರ್ಗಾವಣೆ ಮಾರ್ಗಸೂಚಿಗಳನ್ನು ಪರಿಷ್ಕರಿಸಿದೆ. |

| | | |
|---|---|---|
| ಈ) | ಜೇಷ್ಠತಾ ಪಟ್ಟಿ ಇಲ್ಲದ ಸಂದರ್ಭದಲ್ಲಿ ವರ್ಗಾವಣೆಗಾಗಿ ಜೇಷ್ಠತಾ ಘಟಕವನ್ನು ಯಾವ ರೀತಿ ನಿರ್ಧರಿಸಲಾಗುತ್ತದೆ? ಹಾಗೂ ವರ್ಗಾವಣೆಗಳಲ್ಲಿ ಪಾರದರ್ಶಕತೆ ಕಾಪಾಡಲು ಇಲಾಖೆಗಳು ಅನುಸರಿಸಬೇಕಾದ ಕ್ರಮಗಳಾವುವು; (ವಿವರಣೆಯೊಂದಿಗೆ ಪೂರಕ ಸುತ್ತೋಲೆ/ ಮಾರ್ಗಸೂಚಿಗಳನ್ನು ಒದಗಿಸುವುದು). | ರಾಜ್ಯ ಸಿವಿಲ್ ಸೇವೆಗಳ ಹುದ್ದೆಗಳಲ್ಲಿ ಒಂದು ಘಟಕದ ಜೇಷ್ಠತೆಯಿಂದ ಇನ್ನೊಂದು ಜೇಷ್ಠತಾ ಘಟಕಕ್ಕೆ ವರ್ಗಾವಣೆ ಮಾಡಲು ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 16-A ರಲ್ಲಿ ಪತಿ-ಪತ್ನಿ ಇಬ್ಬರೂ ಸರ್ಕಾರಿ ಸೇವೆಯಲ್ಲಿರುವ ಪ್ರಕರಣಗಳಲ್ಲಿ ಮಾತ್ರ ಷರತ್ತಿಗೊಳಪಟ್ಟು ಘಟಕೀಯ ವರ್ಗಾವಣೆಗೆ ಅವಕಾಶವನ್ನು ಕಲ್ಪಿಸಲಾಗಿರುತ್ತದೆ (ಅಧಿಸೂಚನೆಯ ಪ್ರತಿಯನ್ನು ಅನುಬಂಧ-1 ರಲ್ಲಿ ಇರಿಸಿದೆ). |
| ಉ) | 2023-24ರ ಸಾಲಿನಲ್ಲಿ ನಡೆದಿರುವ ಪಿ.ಡಿ.ಓ. ಹುದ್ದೆಗಳ ಅಕ್ರಮ ವರ್ಗಾವಣೆ ದೂರಿನಲ್ಲಿ ವಿವರಿಸಿದ 6 ಅಂಶಗಳ ಬಗ್ಗೆ ಸರ್ಕಾರವು ತನಿಖೆ ನಡೆಸಿ ಯಾವ ಕ್ರಮ ಕೈಗೊಂಡಿದೆ ಹಾಗೂ ಸದರಿ ಇಲಾಖೆಯು ದಿನಾಂಕ: 07.06.2013ರ ವರ್ಗಾವಣೆ ಮಾರ್ಗಸೂಚಿಯಲ್ಲಿ ತಿಳಿಸಿದಂತೆ ಅನುಬಂಧ-2ರಲ್ಲಿ ಕ್ರೋಢೀಕರಿಸಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ಸಲ್ಲಿಸಿರುವ ಮಾಹಿತಿಗಳಾವುವು (ಪ್ರತಿ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 313 ಜಿಪಿಎ 2022 (ಇ) ಬೆಂಗಳೂರು, ದಿನಾಂಕ: 29.03.2023 ರಂತೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳನ್ನು ರಾಜ್ಯ ವೃಂದವನ್ನಾಗಿ ಪರಿಗಣಿಸಿ ಆದೇಶಿಸಲಾಗಿದೆ. ಮುಂದುವರೆದು, ಸರ್ಕಾರದ ಅಧಿಸೂಚನೆ ಸಂಖ್ಯೆ: ಆರ್‌ಡಿಪಿಆರ್ 313 ಜಿಪಿಕೆ 2022 (ಇ), ಬೆಂಗಳೂರು, ದಿನಾಂಕ: 13.03.2024 ರಲ್ಲಿ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಿಗೆ ಸಹ ತಿದ್ದುಪಡಿ ಮಾಡಲಾಗಿರುತ್ತದೆ. ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ವರ್ಗಾವಣೆಯನ್ನು ಈ ಮೇಲಿನ ಆದೇಶಗಳ ಅನ್ವಯ ಮಾಡಲಾಗಿದ್ದು, ವರ್ಗಾವಣೆಯಿಂದ ಸ್ಥಳ ನಿರೀಕ್ಷಣೆಯಲ್ಲಿದ್ದ ಎಲ್ಲಾ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಸ್ಥಳ ನಿಯುಕ್ತಿಗೊಳಿಸಲಾಗಿರುತ್ತದೆ.<br><br>ದಿನಾಂಕ: 07.06.2013ರ ವರ್ಗಾವಣೆ ಮಾರ್ಗಸೂಚಿಯನ್ನು ಪರಿಷ್ಕರಿಸಿ, ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 33 ಸೇನೌವ 2024, ದಿನಾಂಕ:25.06.2024ರಲ್ಲಿ ಪರಿಷ್ಕೃತ ವರ್ಗಾವಣೆ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ. |

ಸಂಖ್ಯೆ: ಸಿಆಸುಇ 7 ಸೇನೌವ 2025

(ಸಿದ್ದರಾಮಯ್ಯ)

**ಮುಖ್ಯಮಂತ್ರಿ**